**Code No. 10 X(A)**

## ವಾಣಿಜ್ಯ ಪರೀಕ್ಷೆಗಳು

# ಕನ್ನಡ ಬೆರಳಚ್ಚು – ಪ್ರಥಮ ದರ್ಜೆ – ಪ್ರಥಮ ಪತ್ರಿಕೆ

ಜನವರಿ / ಫೆಬ್ರವರಿ, 2020

ಸಮಯ : 15 ನಿಮಿಷಗಳು

ಅಂಕಗಳು : 100

***ಸೂಚನೆಗಳು :***

1) ಈ ಕೆಳಗೆ ಕೊಟ್ಟಿರುವ ವಿಷಯವನ್ನು 10 ರಿಂದ 75 ಸ್ಥಾನಗಳಿಗೆ ಅಂಚಿನ ತಡೆಗಳನ್ನು ಸ್ಥಿರಪಡಿಸಿಕೊಂಡು ಎರಡು ಸಾಲುಗಳ ತೆರಪಿನಲ್ಲಿ ಬೆರಳಚ್ಚು ಮಾಡಬೇಕು.
2) ಕಾಗದದ ಒಂದು ಭಾಗದಲ್ಲಿ ಮಾತ್ರ ಬೆರಳಚ್ಚು ಮಾಡಬೇಕು.
3) ತಪ್ಪಿಲ್ಲದೆ ಅಂದವಾಗಿ ಬೆರಳಚ್ಚು ಮಾಡಲು ವಿಶೇಷ ಗಮನ ಕೊಡಬೇಕು.

---

ಮಕ್ಕಳ ಆರೋಗ್ಯದ ದೃಷ್ಟಿಯಿಂದ ರಾಜ್ಯದ ಎಲ್ಲಾ ಸರಕಾರಿ ಮತ್ತು ಅನುದಾನಿತ ಶಾಲೆಯಲಿ ಶುದ್ಧ ಕುಡಿಯುವ ನೀರಿನ ಆರ್‌ಓ ಘಟಕಗಳನ್ನು ಅಳವಡಿಸಲು ರಾಜ್ಯ ಸರಕಾರಗಳು, ಸಂಘ ಸಂಸ್ಥೆಗಳು, ಕೈಗಾರಿಕೆಗಳ ಸಂಸ್ಥೆಗಳು, ಸಣ್ಣ ಉಳಿತಾಯ ಸಂಸ್ಥೆಗಳು, ಮುಂದಾಗಿರುವುದು ಬಹಳ ಒಳ್ಳೆಯ ಕೆಲಸವೇ ಸರಿ. ಕೆಲವು ದಾನಿಗಳು ತಾವು ಓದಿ ಬಂದಂತಹ ಶಾಲೆಗಳಿಗೆ ಹಾಗೂ ತಾವು ಇರುವ ಅಕ್ಕಪಕ್ಕದ ಸರಕಾರಿ ಶಾಲೆಗಳಿಗೆ ಉಚಿತವಾಗಿ ಶುದ್ಧ ಕುಡಿಯುವ ನೀರಿನ ಆರ್‌ಓ ಘಟಕಗಳನ್ನು ಸ್ಥಾಪಿಸುತ್ತಿದ್ದಾರೆ.

ಕೇಂದ್ರ ಹಾಗೂ ರಾಜ್ಯ ಸರಕಾರದ ನೇತೃತ್ವದಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿವೆ. ಜೊತೆಗೆ ರಾಜ್ಯ ಸರಕಾರದಿಂದ ಕ್ಷೀರ ಭಾಗ್ಯ ಯೋಜನೆ ಮೂಲಕ ಶಾಲಾ ಮಕ್ಕಳಿಗೆ ಉಚಿತವಾಗಿ ಹಾಲನ್ನು ವಿತರಣೆ ಮಾಡಲಾಗುತ್ತಿದೆ. ಈ ಕಾರ್ಯಕ್ರಮಗಳು ನಿರಂತರವಾಗಿ ಮತ್ತು ಸುರಕ್ಷಿತವಾಗಿ ನಡೆಯಬೇಕಾದರೆ ಶಾಲಾ ಮಕ್ಕಳಿಗೆ ಶುದ್ಧ ಕುಡಿಯುವ ನೀರಿನ ಅವಶ್ಯಕತೆಯಿದೆ. ಈ ಹಿನ್ನೆಲೆಯಲ್ಲಿ ದಾನಿಗಳು ಮತ್ತು ಸಂಸ್ಥೆಗಳು ಕೆಲವು ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕೊಡುಗೆಯಾಗಿ ನೀಡಿ, ತಮ್ಮ ಮತ್ತು ಸಂಘ ಸಂಸ್ಥೆಯ ಕಂಪನಿಯ ಹೆಸರುಗಳನ್ನು ಸಹ ಬರೆಸುತ್ತಿದ್ದಾರೆ. ಈ ಶಾಲೆಗಳಲ್ಲಿ ಕೇವಲ ಕುಡಿಯಲು ಮಾತ್ರ ಆರ್‌ಓ ಘಟಕಗಳ ನೀರನ್ನು ಬಳಕೆ ಮಾಡಲಾಗುತ್ತಿದೆ. ಉಳಿದಂತೆ ರಾಜ್ಯದ ಬಹುತೇಕ ಶಾಲೆಗಳಲ್ಲಿ ಕುಡಿಯಲು

ಮತ್ತು ಅಕ್ಷರ ದಾಸೋಹ ಯೋಜನೆಗೆ ಕೊಳಾಯಿ, ಕೊಳವೆ ಬಾವಿ, ತೆರೆದ ಬಾವಿ ಹಾಗೂ ಸ್ಥಳೀಯ ಆಡಳಿತಗಳು ಪೂರೈಕೆ ಮಾಡುತ್ತಿರುವ ನೀರನ್ನೇ ಬಳಕೆ ಮಾಡಲಾಗುತ್ತಿದ. ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಬವಣೆ ತೀವ್ರಗೊಂಡಿದ್ದು, ಶುದ್ಧ ಕುಡಿಯುವ ನೀರು ಕನಸಿನ ಮಾತಾಗಿದೆ. ಸರಕಾರದ ಸಮೀಕ್ಷಾ ವರದಿಯ ಪ್ರಕಾರ ಕೆಲವು ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಕೊರತೆಯಿಂದ ಮಕ್ಕಳು ಅಸ್ವಸ್ಥರಾಗಿರುವುದು ಮತ್ತು ಅನಾರೋಗ್ಯಕ್ಕೆ ತುತ್ತಾಗುತ್ತಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ನೀರಿನ ಘಟಕ ಸ್ಥಾಪನೆ ಬಹಳ ಉಪಯುಕ್ತವಾಗಲಿದೆ.

ಆರೋಗ್ಯದ ದೃಷ್ಟಿಯಿಂದ ಮಕ್ಕಳಿಗೆ ನಿತ್ಯ ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ಆಹಾರ ಸುರಕ್ಷತೆ ಒದಗಿಸುವುದು. ಸರಕಾರದ ಪ್ರಮುಖ ಆದ್ಯತೆಯಾಗಿದೆ. ಆದರಿಂದ ಇನ್ನು ಮುಂದೆ ರುಚಿಯಾದ ಮಧ್ಯಾಹ್ನದ ಬಿಸಿಯೂಟ ತಯಾರಿಸಲು ಕುಡಿಯುವ ನೀರನ್ನು ಬಳಸಲು ತೀರ್ಮಾನಿಸಲಾಗಿದೆ. ಈ ವಿಷಯವಾಗಿ ಸರಕಾರವು ರಾಜ್ಯದ ಎಲ್ಲಾ ಸರಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಆರ್‌ಓ ಘಟಕಗಳನ್ನು ತಕ್ಷಣ ಸ್ಥಾಪಿಸಿ, ಆ ನೀರಿನಿಂದ ಮಧ್ಯಾಹ್ನದ ಬಿಸಿಯೂಟ ತಯಾರಿಸಬೇಕೆಂದು ಎಲ್ಲಾ ಪತ್ರಿಕೆಗಳಲ್ಲಿ ಪ್ರಕಟಿಸಿದೆ ಹಾಗೂ ಶಾಲೆಗಳಿಗೆ ಪ್ರತ್ಯೇಕವಾಗಿ ಪತ್ರವನ್ನು ಬರೆಯಲಾಗುತ್ತಿದೆ. ಇದರಿಂದ ಸರಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ದಿನಾಲು ಕುಡಿಯಲು ಶುದ್ಧ ನೀರು, ಶುದ್ಧವಾದ ಮಧ್ಯಾಹ್ನದ ಬಿಸಿಯೂಟ ಸಿಗುತ್ತಿದೆ.